ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 10 ನೇ ಮಾರ್ಚ್, 2020

ತ್ಯಾಜ್ಯ ಸಂಗ್ರಹಣೆ ವಾಹನಗಳ ಕೊರತೆ ಬಗ್ಗೆ

ಶ್ರೀ ಎಂ. ಎ. ಗೋಪಾಲಸ್ವಾಮಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

500 (505) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹಾಸನ ಜಿಲ್ಲೆಯ ಯಾವುದೇ ಸ್ಥಳೀಯ ಸಂಸ್ಥೆಗಳಲ್ಲೂ ತ್ಯಾಜ್ಯ ಸಂಸ್ಕರಣೆ ನಿಯಮ ಪಾಲನೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇದನ್ನು ಸರಿಪಡಿಸಲು ಸರ್ಕಾರ ಏನು ಕ್ರಮ ಕೈಗೊಂಡಿದೆ;

(ಆ) ಹಾಸನ ಜಿಲ್ಲೆಯ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಪ್ರತಿನಿತ್ಯ ಎಷ್ಟು ಘನತ್ಯಾಜ್ಯ ಸಂಗಹವಾಗುತ್ತಿದೆ ಹಾಗೂ ಅದನ್ನು ವೈಜ್ಞಾನಿಕ ರೀತಿಯಲ್ಲಿ ಪುನರ್ ಬಳಕೆ ಮಾಡುವ ಮತ್ತು ವಿಲೇವಾರಿ ಮಾಡಲು ಕೈಗೊಳ್ಳುತ್ತಿರುವ ಕ್ರಮಗಳೇನು;

(ಇ) ಹಾಸನ ಜಿಲ್ಲೆಯಲ್ಲಿರುವ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ತ್ಯಾಜ್ಯ ಸಂಗ್ರಹಣೆ ಮಾಡಲು ವಾಹನಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ತ್ಯಾಜ್ಯ ಸಂಗ್ರಹಣೆಗಾಗಿ ಎಷ್ಟು ವಾಹನಗಳನ್ನು ಖರೀದಿಸಲಾಗಿದೆ; ಅವು ಯಾವ ನಗರ ಮತ್ತು ಪಟ್ಟಣಗಳಲ್ಲಿ ಕಾರ್ಯನಿರತವಾಗಿವೆ? (ವಿವರ ನೀಡುವುದು)